ಕಛೇರಿ : +91 80 2335 4039
+91 80 2335 4085
ಇ-ಮೇಲ್ : com-hfws@karnataka.gov.in

# ಆಯುಕ್ತಾಲಯ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಸಂಖ್ಯೆ:ಎನ್‌ವಿಬಿಡಿಸಿಪಿ/ಇಎಸ್‌ಟಿ7ಸಿ/ಕೊವಿಡ್19/2020-21 ದಿನಾಂಕ:10.6.2022

## ಸುತ್ತೋಲೆ

ವಿಷಯ: ಕೋವಿಡ್ 19 ಪ್ರಕರಣಗಳು ಹೆಚ್ಚಳವಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತು.

ಉಲ್ಲೇಖ: 1. ರಾಜ್ಯ ಮಟ್ಟದ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ 170ನೇ ಸಭಾ ನಡಾವಳಿಗಳು ದಿನಾಂಕ:6.6.2022

2. ಶ್ರೀ ಲವ್ ಅಗರ್ ವಾಲ್, ಐ ಎ ಎಸ್, ಜಂಟಿ ಕಾರ್ಯದಶಿಗಳು, ಭಾರತ ಸರ್ಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ನಿರ್ಮಾಣ ಭವನ, ನವದೆಹಲಿ, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: T- 18015/307/2020-IDSP, ದಿನಾಂಕ: 9.6.2022.

3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆದೇಶ ದಿನಾಂಕ: 25.4.2022

****

ಪ್ರಸ್ತುತ, ರಾಜ್ಯದಲ್ಲಿ ಕಳೆದ 10 ದಿನಗಳಿಂದ ದೈನಂದಿನ ಕೋವಿಡ್ 19 ಪ್ರಕರಣಗಳ ಸಂಖ್ಯೆಯಲ್ಲಿ ನಿಧಾನಗತಿಯ ಏರಿಕೆಯನ್ನು ಗಮನಿಸಲಾಗಿದ್ದು, ದಿನಾಂಕ: 9.6.2022 ರಂದು 471 ಪ್ರಕರಣಗಳು ಹಾಗು ಪಾಸಿಟಿವ್ ಪ್ರಮಾಣ 2.14% ವರದಿಯಾಗಿದೆ. ಕೋವಿಡ್ 19 ನ ಮೂರನೇ ಅಲೆಯ ನಂತರದ ಅವಧಿಯ ಏರಿಕೆ ಇದಾಗಿದ್ದು, ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು ಅಗತ್ಯವಾಗಿದೆ.

1. ಸಾರ್ವಜನಿಕ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವುದನ್ನು ಉಲ್ಲೇಖ (3) ರ ಅನ್ವಯ ಕಡ್ಡಾಯಗೊಳಿಸಲಾಗಿದ್ದು, ಈ ಕ್ರಮವನ್ನು ಜಾರಿಗೊಳಿಸಲು ಮಾರ್ಷಲ್/ ಪೋಲೀಸ್ ಸಿಬ್ಬಂದಿಗಳ ಸಹಾಯವನ್ನು ಪಡೆಯುವುದು.
2. ಮುಚ್ಚಿದ ಸಂರಚನೆಯನ್ನು (Closed areas) ಹೊಂದಿದ ಸ್ಥಳಗಳಾದ ಶಾಪಿಂಗ್ ಮಾಲ್‌ಗಳು, ರೆಸ್ಟೋರೆಂಟ್‌ಗಳು, ಪಬ್‌ಗಳು, ಕೆಫೆಟೇರಿಯಾ/ ಹೊಟೇಲ್‌ಗಳು, ಶೈಕ್ಷಣಿಕ ಸಂಸ್ಥೆಗಳು, ಹಾಸ್ಟೆಲ್‌ಗಳು, ಕಛೇರಿಗಳು, ಕಾರ್ಖಾನೆ ಇತ್ಯಾದಿ ಪ್ರದೇಶಗಳಲ್ಲಿ ಸಿಬ್ಬಂದಿಗಳು ಮಾಸ್ಕ್ ಧರಿಸುವುದನ್ನು ಕಡ್ಡಾಯಗೊಳಿಸುವುದು ಹಾಗೂ ಮಾಸ್ಕ್ ಧರಿಸಿ ಬರುವರಿಗೆ ಮಾತ್ರವೇ ಪ್ರವೇಶ ನೀಡುವುದನ್ನು ಖಚಿತಪಡಿಸಿಕೊಳ್ಳುವುದು ಆಯಾ ಸಂಸ್ಥೆಯ ಮಾಲೀಕರ / ಆಡಳಿತಗಳ ಜವಾಬ್ದಾರಿಯಾಗಿರುತ್ತದೆ.
3. ಸ್ವಂತ ವಾಹನಗಳು ಹಾಗೂ ಸಾರ್ವಜನಿಕ ಸಾರಿಗೆ ವಾಹನಗಳಲ್ಲಿ ( ಬಸ್ ಹಾಗೂ ರೈಲು) ಪ್ರಯಾಣಿಸುವ ಸಂದರ್ಭದಲ್ಲಿ ಸಾರ್ವಜನಿಕರು ಮಾಸ್ಕ್ ಧರಿಸುವುದು ಕಡ್ಡಾಯವಾಗಿರುತ್ತದೆ.
4. ILI & SARI ಲಕ್ಷಣಗಳನ್ನು ಹೊಂದಿದವರು, ಹೈರಿಸ್ಕ್ ಗುಂಪಿನವರು ಹಾಗೂ ಇತರ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರನ್ನು ಆದ್ಯತೆಯ ಮೇಲೆ ಪರೀಕ್ಷೆಗೆ ಒಳಪಡುವುದು ಹಾಗೂ ಫಲಿತಾಂಶ ಲಭ್ಯವಾಗುವವರೆಗೂ ಮನೆಯಲ್ಲಿಯೇ ಪ್ರತ್ಯೇಕವಾಗಿರುವುದು.
5. ಅರ್ಹ ಜನರೆಲ್ಲರೂ Precautionary dose ಸೇರಿದಂತೆ, ಕೋವಿಡ್ 19 ಲಸಿಕೆಯನ್ನು ಪಡೆಯುವುದು.

ಕೋವಿಡ್ 19 ಮುಂಜಾಗ್ರತಾ ಕ್ರಮವಾಗಿ ಮೇಲೆ ತಿಳಿಸಿದ ಅಂಶಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

10.6.22
(ಡಿ. ರಂದೀಪ್)
ಆಯುಕ್ತರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಇವರಿಗೆ,

1. ವಿಶೇಷ ಆಯುಕ್ತರು ( ಆರೋಗ್ಯ ಮತ್ತು ತಂತ್ರಜ್ಞಾನ), ಬಿ ಬಿ ಎಂ ಪಿ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
3. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
4. ಅಭಿಯಾನ ನಿರ್ದೇಶಕರು , ರಾಷ್ಟ್ರೀಯ ಆರೋಗ್ಯ ಅಭಿಯಾನ
5. ನಿರ್ದೇಶಕರು – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು
6. ನಿರ್ದೇಶಕರು – ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
7. ಜಿಲ್ಲಾ ಆರೋಗ್ಯಾಧಿಕಾರಿಗಳು , ಎಲ್ಲಾ ಜಿಲ್ಲೆಗಳು.
8. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿ ಬಿ ಎಂ ಪಿ, ಬೆಂಗಳೂರು.
9. ಜಿಲ್ಲಾ ಸರ್ಜನ್‌ಗಳು ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.

ಪ್ರತಿಯನ್ನು ಮಾಹಿತಿಗಾಗಿ ಕಳುಹಿಸಿದೆ.

1. ಮುಖ್ಯ ಆಯುಕ್ತರು, ಬಿ ಬಿ ಎಂ ಪಿ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
4. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು,
5. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು,

RLP 10.6.22